ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE : 29/10/2019

# ಅನರ್ಹರ ಕುರಿತ ಹೇಳಿಕೆ ಈಶ್ವರಪ್ಪ ಗರಂ

ಪ್ರಜಾವಾಣಿ ವಾರ್ತೆ 29/10

ಶಿವಮೊಗ್ಗ: ಅನರ್ಹ ಶಾಸಕರ ಕುರಿತು ಬಿಜೆಪಿ ಮುಖಂಡರ ಹೇಳಿಕೆಗಳಿಗೆ ಸಚಿವ ಈಶ್ವರಪ್ಪ ಗರಂ ಆಗಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಒಬ್ಬೊಬ್ಬರು ಒಂದೊಂದು ರೀತಿ ಹೇಳಿಕೆ ನೀಡುವ ಅವಶ್ಯಕತೆ ಇಲ್ಲ. ರೇಣುಕಾಚಾರ್ಯ, ಲಕ್ಷ್ಮಣ ಸವದಿ ಹೇಳಿಕೆ ಸರಿಯಲ್ಲ. ಅದು ಪಕ್ಷದ ಅಧ್ಯಕ್ಷರಿಗೆ ಬಿಟ್ಟ ವಿಚಾರ. ಅನರ್ಹ ಶಾಸಕರ ಕುರಿತು ಚರ್ಚೆ ಅನಗತ್ಯ' ಎಂದರು.

'ಅವರು ರಾಜೀನಾಮೆ ನೀಡದೆ ಹೋಗಿದ್ದರೆ ಇಷ್ಟು ಬೇಗ ರಾಜ್ಯದಲ್ಲಿ ಬಿಜೆಪಿ ಅಧಿಕಾರ ಹಿಡಿಯಲು ಸಾಧ್ಯವಾಗುತ್ತಿರಲಿಲ್ಲ. ಅವರ ಅಪೇಕ್ಷೆ ಈಡೇರಿಸುವುದು ಪಕ್ಷದ ಕರ್ತವ್ಯ' ಎಂದರು.